ಮೈಸೂರ ಗೆಜೆಟ್ಟ

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಅಕ್ಟೋಬರ್ ತಾ॥ 24, ಸ॥ 1885.

ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯೂಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುವಗ್ಯೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.
ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಪರಾ ಬರೆಯಲ್ಪಡಬಹುದಾದಂತಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನ್‌ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಫೇಸಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜು ಮಾಡಿರುವರ. ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮವರಾಸ್ ಬ್ಯಾಂಕಿನ ಮೇಲೆ, ಪ್ಯಾಯ್ಲೆ ಕೇಟೂದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಫೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜೆ ಮಾಡಲ್ಪಡಲಾರದು.

ಹೆಚ್. ಹಡಿಸ್ಸ್, ಕಾಂಪ್ಟ್ರೋಲರ್.

ಅಂಬಕೇ ಇಲಾಖಾ.

ತಾರೀಖು 21ನೇ ಅಕ್ಟೋಬರ್ 1885.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಮೈಸೂರು ಮಹಾರಾಜ ರಾಜಾನಾಹೆಬ್ ಬಹದೂರ ವರ ದಿವಾನರವರ ಆಪ್ಪಣೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಬಕೆ ಆಫೀಸುಗಳು ಸ್ಥಾಪಿಸಲ್ಪಟ್ಟಿರುತ್ತವೆ:—

ತಾಲ್ಲೂಕು.		ಅಂಬಕೆ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ಕಾನಕಾನಹಳ್ಳಿ	..	ಕಗ್ಗಲಿಪುರ.
ದೊಡ್ಡಬಳ್ಳಾಪುರ	..	ಬ್ಯಾತಾ.
ಡಿಟ್ಟೋ	..	ಚಿಕ್ಕಬಳವಂಗಳ
ಡಿಟ್ಟೋ	..	ಬನ್ನಿಮಂಗಲ.
ಡಿಟ್ಟೋ	..	ಆರುಡಿ.

ಬಿ. ಮರಿಗಂಗಯ್ಯ,
ಅಂಬಕೆ ಬಕ್ಷಿ.